ಕರ್ನಾಟಕ ಸರ್ಕಾರ

# ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, ಮಲ್ಲೇಶ್ವರಂ, ಬೆಂಗಳೂರು-03

**ಸಂಖ್ಯೆ: ಎಸ್.1/ವಾ.ಪ/ ಖಾ.ಅರ್ಜಿ.ನೋಂ/31/2020-21** **ದಿನಾಂಕ: 02.02.2021**

## : ಸುತ್ತೋಲೆ :

**ವಿಷಯ:** ಏಪ್ರಿಲ್/ಮೇ 2021ರ ಮಾಹೆಯಲ್ಲಿ ನಡೆಯಲಿರುವ ವಾಣಿಜ್ಯ ಪರೀಕ್ಷೆಗೆ ಖಾಸಗಿ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸುವ ಬಗ್ಗೆ.

**ಉಲ್ಲೇಖ:** ಮಂಡಳಿ ಸುತ್ತೋಲೆ ಸಂಖ್ಯೆ: ಎಸ್1/ವಾಣಿಜ್ಯ ಪರೀಕ್ಷೆ/ಖಾ.ಅ.ನೋಂ/83/2019-20 ದಿನಾಂಕ: 12.03.2020

***

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಜುಲೈ-2020ರಲ್ಲಿ ನಡೆಸಲು ಉದ್ದೇಶಿಸಿದ್ದ ವಾಣಿಜ್ಯ ಪರೀಕ್ಷೆಗೆ ಖಾಸಗಿಯಾಗಿ ನೊಂದಣಿ ಮಾಡಿಕೊಳ್ಳಲು ಉಲ್ಲೇಖಿತ ಸುತ್ತೋಲೆಯಲ್ಲಿ ಅವಕಾಶ ನೀಡಲಾಗಿತ್ತು. ಆದರೆ ಕೋವಿಡ್-19 ಕಾರಣದಿಂದ ಪರೀಕ್ಷೆ ನಡೆಸಲಾಗಿರುವುದಿಲ್ಲ. ಆದ್ದರಿಂದ ಏಪ್ರಿಲ್/ಮೇ 2021ರ ಮಾಹೆಯಲ್ಲಿ ವಾಣಿಜ್ಯ ಪರೀಕ್ಷೆಗಳನ್ನು ನಡೆಸಲು ಉದ್ದೇಶಿಸಿದ್ದು, ವಾಣಿಜ್ಯ ಪರೀಕ್ಷೆಗಳಾದ ಆಂಗ್ಲ ಮತ್ತು ಕನ್ನಡ ಬೆರಳಚ್ಚು ಪರೀಕ್ಷೆ, ಕನ್ನಡ ಮತ್ತು ಆಂಗ್ಲ ಶೀಘ್ರಲಿಪಿ ಪರೀಕ್ಷೆ, ಮುದ್ರಣ ಪರೀಕ್ಷೆ ಹಾಗೂ ಬರವಣಿಗೆ ಪರೀಕ್ಷೆಗಳನ್ನು ಖಾಸಗಿಯಾಗಿ ತೆಗೆದುಕೊಂಡು ಪರೀಕ್ಷೆಗೆ ಹಾಜರಾಗಲು ಇಚ್ಛಿಸುವ ಅಭ್ಯರ್ಥಿಗಳು ತಮಗೆ ಹತ್ತಿರವಿರುವ ಸರ್ಕಾರದಿಂದ ಮಾನ್ಯತೆ ಪಡೆದ ಯಾವುದಾದರೂ ವಾಣಿಜ್ಯ ಶಿಕ್ಷಣ ಸಂಸ್ಥೆಗಳ ಮೂಲಕ ನಿಗಧಿತ ಅರ್ಜಿ ನಮೂನೆ, ಹಾಗೂ ನೋಂದಣಿ ಶುಲ್ಕ ರೂ. 180-00ಗಳನ್ನು ಪಾವತಿಸಿದ ನೆಫ್ಟ್ ಚಲನ್‌ಗಳೊಂದಿಗೆ ತಮ್ಮ ಪ್ರಸ್ತಾವನೆಗಳನ್ನು ನಿರ್ದೇಶಕರು(ಇತರೆ ಪರೀಕ್ಷೆಗಳು) ಕರ್ನಾಟಕ ಪ್ರೌಢಶಿಕ್ಷಣ ಪರೀಕ್ಷಾ ಮಂಡಳಿ, ಬೆಂಗಳೂರು-03ರವರಿಗೆ ಕಳುಹಿಸಿ ತಮ್ಮ ಹೆಸರುಗಳನ್ನು ನೋಂದಾಯಿಸಿಕೊಳ್ಳುವುದು. ನೋಂದಣಿ ಪ್ರಮಾಣ ಪತ್ರಗಳನ್ನು (ಎನ್‌ರೋಲ್‌ಮೆಂಟ್ ಸರ್ಟಿಫಿಕೇಟ್) ಸಂಬಂಧಪಟ್ಟ ಸಂಸ್ಥೆಯ ಪ್ರಾಂಶುಪಾಲರುಗಳಿಂದ ಪಡೆದು ನಂತರದಲ್ಲಿ ಸಂಸ್ಥೆಯ ಮೂಲಕ ಅರ್ಜಿ ಹಾಗೂ ಪರೀಕ್ಷಾ ಶುಲ್ಕವನ್ನು ಆನ್‌ಲೈನ್ ಮೂಲಕವೇ ಪರೀಕ್ಷಾ ಮಂಡಳಿಗೆ ಪಾವತಿಸುವುದು.

| ಕ್ರ.ಸಂ. | ವಿವರಗಳು | ದಿನಾಂಕಗಳು |
|---|---|---|
| 1. | ನೋಂದಣಿ ಶುಲ್ಕವನ್ನು ಅಭ್ಯರ್ಥಿಗಳಿಂದ ಸ್ವೀಕರಿಸಲು ಕೊನೆಯ ದಿನಾಂಕ | 11.02.2021 |
| 2. | ನೋಂದಣಿ ಶುಲ್ಕವನ್ನು ನೆಫ್ಟ್ ಚಲನ್ ಮೂಲಕ ಬ್ಯಾಂಕ್‌ಗೆ ಹಣವನ್ನು ತುಂಬುವ ದಿನಾಂಕ | 12.02.2021 |
| 3. | ನೋಂದಣಿ ಅರ್ಜಿ ನಮೂನೆಗಳನ್ನು ಪರೀಕ್ಷಾ ಶುಲ್ಕದೊಂದಿಗೆ ಮಂಡಳಿಗೆ ಕಳುಹಿಸಲು ಕೊನೆಯ ದಿನಾಂಕ | 15.02.2021 |

ಅಭ್ಯರ್ಥಿಗಳು ಖಾಸಗಿ ನೊಂದಣಿ ಶುಲ್ಕವಾಗಿ ರೂ. 180-00(ಒಂದು ನೂರ ಎಂಭತ್ತು ರೂಪಾಯಿಗಳು ಮಾತ್ರ)ಗಳನ್ನು ಯಾವುದಾದರೂ ರಾಷ್ಟ್ರೀಕೃತ ಬ್ಯಾಂಕಿನಲ್ಲಿ ಮಂಡಳಿಯ ಖಾತೆಗೆ ನೆಫ್ಟ್ ಚಲನ್ ಮೂಲಕ ಜಮಾ ಮಾಡುವುದು. ಹಾಗೂ ಚಲನ್‌ನ ಪ್ರತಿಯನ್ನು ನಾಮಿನಲ್ ರೋಲ್ ನೊಂದಿಗೆ ಸಲ್ಲಿಸುವುದು. ನೊಂದಣಿ ಮಾಡಲು ಸಲ್ಲಿಸಬೇಕಾದ ಅರ್ಜಿ ಶುಲ್ಕ ಮತ್ತು ಇತರೆ ಅವಶ್ಯಕವಾದ ದಾಖಲೆಗಳನ್ನು ಹತ್ತಿರುವಿರುವ ಸರ್ಕಾದಿಂದ ಮಾನ್ಯತೆ ಪಡೆದ ವಾಣಿಜ್ಯ ಸಂಸ್ಥೆಯ ಮುಖಾಂತರ ಕಳುಹಿಸತಕ್ಕದ್ದು.

ಈ ಕೆಳಗೆ ಸೂಚಿಸಿರುವ ಪ್ರಕರಣಗಳಲ್ಲಿ ಮಾತ್ರ ಖಾಸಗಿಯಾಗಿ ಈ ಪರೀಕ್ಷೆಗೆ ನೊಂದಾಯಿಸಲು ಅರ್ಹರಾಗಿರುತ್ತಾರೆ.

- ಅಭ್ಯರ್ಥಿಯು ಯಾವುದೇ ಸರ್ಕಾರಿ/ಸ್ಥಳೀಯ ಸಂಸ್ಥೆ/ರಿಜಿಸ್ಟರ್ಡ್ ಖಾಸಗಿ ಸಂಸ್ಥೆಗಳಲ್ಲಿ ಕನಿಷ್ಠ ಮೂರು ವರ್ಷ ಸೇವೆಯನ್ನು ಸಲ್ಲಿಸಿರಬೇಕು.
- ಖಾಸಗಿಯಾಗಿ ಬೆರಳಚ್ಚು ಅಥವಾ ಶೀಘ್ರಲಿಪಿ ಪ್ರೌಢ ದರ್ಜೆ/ಪ್ರವೀಣ ದರ್ಜೆ ಪರೀಕ್ಷೆಗೆ ಕುಳಿತುಕೊಳ್ಳಲು ಬಯಸುವವರು ಸಂಬಂಧಪಟ್ಟ ವಿಷಯದ ಪ್ರಥಮ ದರ್ಜೆ/ಪ್ರೌಢದರ್ಜೆ ಪರೀಕ್ಷೆಯನ್ನು ಒಂದು ವರ್ಷ ಮುಂಚಿತವಾಗಿ ಉತ್ತೀರ್ಣ ಮಾಡಿರಬೇಕು.
- ಖಾಸಗಿಯಾಗಿ ವಾಣಿಜ್ಯ ಪರೀಕ್ಷೆಗೆ ಕುಳಿತುಕೊಳ್ಳಲು ಬಯಸುವ ವಿದ್ಯಾರ್ಥಿ/ವಿದ್ಯಾರ್ಥಿನಿಯರು ಮಾರ್ಚ್-2020 ತಿಂಗಳಲ್ಲಿ ಅಥವಾ ಅದಕ್ಕಿಂತ ಮುಂಚಿತವಾಗಿಯೇ ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ತೇರ್ಗಡೆಯಾಗಿರಬೇಕು ಹಾಗೂ ಅಗತ್ಯ ಪ್ರಮಾಣ ಪತ್ರದ ನಕಲನ್ನು ಲಗತ್ತಿಸುವುದು.
- ನೋಂದಣಿ ಮಾಡಿಸಲು ಯಾವ ವಾಣಿಜ್ಯ ಸಂಸ್ಥೆಯ ಮೂಲಕ ನೋಂದಣಿ ಅರ್ಜಿಯನ್ನು ಕಳುಹಿಸಿರುತ್ತಾರೆಯೋ, ಅದೇ ವಾಣಿಜ್ಯ ಸಂಸ್ಥೆಗೆ ಅರ್ಹತೆ ಪಡೆದವರ ನೋಂದಣಿ ಪತ್ರವನ್ನು(ಎನ್‌ರೋಲ್ಮೆಂಟ್ ಸರ್ಟಿಫಿಕೇಟ್) ಕಳುಹಿಸಲಾಗುವುದು.
- ವಾಣಿಜ್ಯ ಸಂಸ್ಥೆಯ ಪ್ರಾಚಾರ್ಯರು ತಮಗೆ ಬಂಧ ಎಲ್ಲಾ ಅರ್ಜಿಗಳನ್ನು ನಿಯಮಾನುಸಾರ ಪರಿಶೀಲಿಸಿ ನೇರವಾಗಿ ಶ್ರೀಮತಿ ಹೇಮಲತಾ ಡಿ ನಾಯಕ್, ಸಹಾಯಕ ನಿರ್ದೇಶಕರು(ವಾಣಿಜ್ಯ ವಿಭಾಗ) ಕರ್ನಾಟಕ ಪ್ರೌಢಶಿಕ್ಷಣ ಪರೀಕ್ಷಾ ಮಂಡಳಿ, ಮಲ್ಲೇಶ್ವರಂ, ಬೆಂಗಳೂರು-03 ಈ ವಿಳಾಸಕ್ಕೆ ಕಳುಹಿಸತಕ್ಕದ್ದು.
- ಆನ್‌ಲೈನ್‌ನಲ್ಲಿ ಪರೀಕ್ಷಾ ಅರ್ಜಿ ಸಲ್ಲಿಸುವಾಗ ಮಂಡಳಿಯಿಂದ ನೀಡಲಾದ ನೋಂದಣಿ ಪತ್ರವನ್ನು ನಿಗಧಿತ ಕಾಲಂನಲ್ಲಿ ಅಪ್‌ಲೋಡ್ ಮಾಡಬೇಕು.

**ವಿಶೇಷ ಸೂಚನೆ:** ಜುಲೈ-2020ರಲ್ಲಿ ನಡೆಸಬೇಕಾಗಿದ್ದ ವಾಣಿಜ್ಯ ಪರೀಕ್ಷೆಗೆ ಖಾಸಗಿಯಾಗಿ ನೋಂದಣಿ ಮಾಡಿಕೊಂಡಿರುವ ಅಭ್ಯರ್ಥಿಗಳು ಮತ್ತೊಮ್ಮೆ ನೊಂದಣಿ ಮಾಡಿಕೊಳ್ಳುವ ಅವಶ್ಯಕತೆಇರುವುದಿಲ್ಲ.

6/2/2021

ನಿರ್ದೇಶಕರು

(ಇತರೆ ಪರೀಕ್ಷೆಗಳು)

**ಪ್ರತಿಗಳನ್ನು :-**

1. ನಿರ್ದೇಶಕರು ಮತ್ತು ಕಾರ್ಯದರ್ಶಿಗಳ ಆಪ್ತ ಶಾಖೆಗೆ.
2. ವಿಭಾಗೀಯ ಮಟ್ಟದ ಎಲ್ಲಾ ಕಾರ್ಯದರ್ಶಿಗಳಿಗೆ ಹಾಗೂ ಪದನಿಮಿತ್ತ ಸಹನಿರ್ದೇಶಕರುಗಳಿಗೆ,
3. ಹಿರಿಯ ಸಹಾಯಕ ನಿರ್ದೇಶಕರು, ವಾಣಿಜ್ಯ ಶಾಖೆ, ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗರಸ್ತೆ, ಬೆಂಗಳೂರು-01
4. ಕರ್ನಾಟಕ ರಾಜ್ಯದ ಮಾನ್ಯತೆ ಪಡೆದ ಎಲ್ಲಾ ವಾಣಿಜ್ಯ ಶಾಲೆಗಳ ಪ್ರಾಚಾರ್ಯರುಗಳಿಗೆ.
5. ಶಾಖಾಧಿಕಾರಿಗಳು, ಕಂಪ್ಯೂಟರ್ ಶಾಖೆರವರಿಗೆ ಮಂಡಳಿಯ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ತಿಳಿಸಿದೆ.
6. ಕಛೇರಿ ಪ್ರತಿ.